# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | 334 |
| ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 07-07-2023 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ರೈತರು ಕೀಟನಾಶಕ ಹಾಗೂ ಕಳೆನಾಶಕಗಳನ್ನು ಹೆಚ್ಚಾಗಿ ಬಳಸುತ್ತಿರುವುದರಿಂದ ಜೀವ ವೈವಿಧ್ಯಕ್ಕೆ ಕಂಟಕ, ಆರೋಗ್ಯಕ್ಕೆ ಮಾರಕ ಹಾಗೂ ಭೂಮಿ ಸಹ ಬರಡಾಗುತ್ತಿರುವ ಗಂಭೀರ ಸಮಸ್ಯೆ ಸರ್ಕಾರದ ಗಮನಕ್ಕೆ ಬಂದಿದೆಯೇ: | ಅವೈಜ್ಞಾನಿಕ ಹಾಗೂ ಅಸಮರ್ಪಕ ರಾಸಾಯನಿಕ ಪೀಡೆನಾಶಕಗಳ ಬಳಕೆಯಿಂದ ಪರಿಸರಕ್ಕೆ ಹಾನಿಯನ್ನು ಉಂಟುಮಾಡುವ ಸಂಭವ ಹೆಚ್ಚಾಗಿರುತ್ತದೆ. ಆದರೆ, ರಾಜ್ಯದಲ್ಲಿ ರೈತರು ಕೀಟನಾಶಕ ಹಾಗೂ ಕಳೆನಾಶಕಗಳನ್ನು ಹೆಚ್ಚಾಗಿ ಬಳಸುತ್ತಿರುವುದರಿಂದ ಜೀವ ವೈವಿಧ್ಯಕ್ಕೆ ಕಂಟಕ, ಆರೋಗ್ಯಕ್ಕೆ ಮಾರಕ ಹಾಗೂ ಭೂಮಿ ಸಹ ಬರಡಾಗುತ್ತಿರುವ ಗಂಭೀರ ಸಮಸ್ಯೆಗಳ ಕುರಿತಾಗಿ ಸರ್ಕಾರಕ್ಕೆ ವರದಿಯಾಗಿರುವುದಿಲ್ಲ. ಆದರೆ ಹಲವು ಪ್ರದೇಶಗಳಿಗೆ ಅಗತ್ಯಕ್ಕಿಂತ ಹೆಚ್ಚಾಗಿ ಅಥವಾ ಬೆಳೆಗಳಿಗೆ ಶಿಫಾರಸ್ಸು ಮಾಡಿರದ ಕೀಟನಾಶಕಗಳನ್ನು ಬಳಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಕೀಟನಾಶಕ ಹಾಗೂ ಕಳೆನಾಶಕಗಳ ಬಳಕ ನಿಯಂತ್ರಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ: | ರಾಜ್ಯದ ರೈತರು ಪೀಡೆನಾಶಕಗಳನ್ನು ವಿವೇಚನಾತ್ಮಕವಾಗಿ ಬಳಸಲು ಕೆಳಕಂಡಂತೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>➢ ಪೀಡೆನಾಶಕಗಳ ಬಳಕೆಯಿಂದಾಗುವ ದುಷ್ಪರಿಣಾಮಗಳನ್ನು ತಡೆಯುವ ನಿಟ್ಟಿನಲ್ಲಿ ಸುರಕ್ಷಿತ ಕೀಟನಾಶಕ ಬಳಕೆ ಮತ್ತು ಸಮಗ್ರ ಪೀಡೆ ನಿರ್ವಹಣೆ ಬಗ್ಗೆ ಹೋಬಳಿ ಮಟ್ಟದಲ್ಲಿ ರೈತರಿಗೆ ಹಾಗೂ ಪರಿಕರ ಮಾರಾಟಗಾರರಿಗೆ ಜನಪ್ರತಿನಿಧಿಗಳು, ಕೃಷಿ ವಿಜ್ಞಾನಿಗಳು, ಕೀಟನಾಶಕ ತಯಾರಕರು ಮತ್ತು ಸರ್ಕಾರೇತರ ಸಂಸ್ಥೆಗಳ ಸಹಯೋಗದೊಂದಿಗೆ ತರಬೇತಿಗಳನ್ನು ಆಯೋಜಿಸಲಾಗುತ್ತಿದೆ.<br>➢ ಇಲಾಖೆಯಲ್ಲಿ ಸ್ಥಾಪಿಸಲಾಗಿರುವ ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳ ಮೂಲಕ ತಾಂತ್ರಿಕ ಸಿಬ್ಬಂದಿ |

| | | |
|---|---|---|
| | | ಇ-ಸ್ಯಾಪ್ ತಂತ್ರಜ್ಞಾನವನ್ನು ಬಳಸಿ ಕೀಟ/ರೋಗಗಳನ್ನು ಸಮಯೋಚಿತವಾಗಿ ಗುರುತಿಸಿ, ತೀವ್ರತೆಗೆ ಅನುಗುಣವಾಗಿ ಕೈಗೊಳ್ಳಬೇಕಾದ ನಿರ್ವಹಣಾ ಕ್ರಮಗಳು ಹಾಗೂ ಸೂಕ್ತವಾದ ಪೀಡೆನಾಶಕಗಳನ್ನು ರೈತರಿಗೆ ಶಿಫಾರಸ್ಸು ಮಾಡುವ ಮೂಲಕ ಅನಗತ್ಯ ರಾಸಾಯನಿಕ ಪೀಡೆನಾಶಕಗಳ ಬಳಕೆಯನ್ನು ತಡೆಯಲಾಗುತ್ತಿದೆ.<br>➢ ಇಲಾಖೆಯಲ್ಲಿ ಸ್ಥಾಪಿಸಲಾಗಿರುವ 224 ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳ ಮೂಲಕ ಸಮಗ್ರ ಪೀಡೆ ನಿರ್ವಹಣೆ ಹಾಗೂ ಪರಿಸರ ಸ್ನೇಹಿ ಪೀಡೆನಾಶಕಗಳ ಬಳಕೆ ಕುರಿತು ರೈತರಿಗೆ ಅರಿವು ಮೂಡಿಸಲಾಗುತ್ತಿದೆ.<br>➢ ಅತಿಯಾಗಿ ರಾಸಾಯನಿಕ ಪೀಡೆನಾಶಕಗಳ ಬಳಕೆಯನ್ನು ತಪ್ಪಿಸಲು ಇಲಾಖೆಯ ತರಬೇತಿ ಕಾರ್ಯಕ್ರಮಗಳಲ್ಲಿ ಸಮಗ್ರ ಪೀಡೆ ನಿರ್ವಹಣೆ ಬಗ್ಗೆ ರೈತರಿಗೆ ಮಾಹಿತಿಯನ್ನು ನೀಡಲಾಗುತ್ತಿದೆ.<br>➢ ಸಸ್ಯ ಸಂರಕ್ಷಣೆ ಯೋಜನೆ ಹಾಗೂ ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯಡಿ ರೈತರಿಗೆ ಸಹಾಯಧನದಡಿ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳನ್ನು ವಿತರಿಸಲಾಗುತ್ತಿದೆ.<br>➢ ಬೆಳೆ ಮತ್ತು ಆಹಾರ ಪದಾರ್ಥಗಳನ್ನು ಪೀಡೆನಾಶಕ ಶೇಷಾಂಶ ವಿಶ್ಲೇಷಣೆಗೆ ಒಳಪಡಿಸಲಾಗುತ್ತಿದ್ದು, ವಿಶ್ಲೇಷಣೆಯಲ್ಲಿ ಪೀಡೆನಾಶಕಗಳ ಅಂಶ ಕಂಡುಬಂದಲ್ಲಿ, ಶಿಫಾರಸ್ಸು ಪ್ರಮಾಣದಲ್ಲಿ ಅಗತ್ಯಕ್ಕನುಸಾರ ಸುರಕ್ಷಿತ ಪೀಡೆನಾಶಕಗಳನ್ನು ಮಾತ್ರ ಬಳಸಲು ರೈತರಲ್ಲಿ ಅರಿವು ಮೂಡಿಸಲಾಗುತ್ತಿದೆ. |
| ಇ) | ರೈತರು ಕೀಟ ಮತ್ತು ಕಳೆಗಳನ್ನು ಜೈವಿಕ ಮಾದರಿಯಲ್ಲಿ ನಿಯಂತ್ರಣ ಮಾಡಲು ಅವರನ್ನು ಪ್ರೇರೇಪಿಸಲು ಮತ್ತು ಉತ್ತೇಜಿಸಲು ಸರ್ಕಾರ ರೂಪಿಸಿರುವ ಯೋಜನ ಮತ್ತು ಕಾರ್ಯಕ್ರಮಗಳೇನು: | ಕೃಷಿ ಇಲಾಖೆಯು ಕ್ಷೇತ್ರ ಮಟ್ಟದಲ್ಲಿ ಪೀಡೆನಾಶಕಗಳ ಬಳಕೆಯನ್ನು ಕಡಿಮೆ ಮಾಡಲು ಹಾಗೂ ಜೈವಿಕ ಪೀಡೆನಾಶಕಗಳ ಬಳಕೆಯನ್ನು ಉತ್ತೇಜಿಸಲು ಜೈವಿಕ ಪೀಡೆನಾಶಕಗಳ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಸಸ್ಯ ಸಂರಕ್ಷಣೆ ಯೋಜನೆಯ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಾಕಾರಕಗಳ ವಿತರಣಾ ಕಾರ್ಯಕ್ರಮದಡಿ ಶೇ. 50 ರ ರಿಯಾಯಿತಿ ದರದಲ್ಲಿ ರೈತ ಸಂಪರ್ಕ ಕೇಂದ್ರಗಳ ಮೂಲಕ ದಾಸ್ತಾನೀಕರಿಸಿ ವಿತರಿಸಲಾಗುತ್ತಿದೆ. |

| | | |
|---|---|---|
| | | ಸಮಗ್ರ ಪೀಡೆ ನಿರ್ವಹಣೆಯಲ್ಲಿ ಕಡ್ಡಾಯವಾಗಿ ಜೈವಿಕ ಪೀಡೆನಾಶಕಗಳನ್ನು ಬಳಸಲು ರೈತರಲ್ಲಿ ಅರಿವು ಮೂಡಿಸಲಾಗುತ್ತಿದೆ. |
| ಈ) | ರಾಜ್ಯದ ರೈತರು ಕೀಟನಾಶಕ ಹಾಗೂ ಕಳೆನಾಶಕಗಳನ್ನು ಅತಿಯಾಗಿ ಬಳಸುತ್ತಿರುವುದರಿಂದ ಕ್ಯಾನ್ಸರ್ ಸೇರಿದಂತೆ ಹಲವಾರು ಮಾರಕ ರೋಗಗಳಿಗೆ ಎಡೆಮಾಡಿಕೊಡುತ್ತಿರುವ ಕಳವಳಕಾರಿ ವಿದ್ಯಮಾನವನ್ನು ತಡೆಯಲು ಸರ್ಕಾರ ಏನು ಕ್ರಮ ಕೈಗೊಂಡಿದೆ? | ➢ ಅತಿಯಾದ ರಾಸಾಯನಿಕ ಪೀಡೆನಾಶಕಗಳ ಬಳಕೆಯಿಂದಾಗುವ ದುಷ್ಪರಿಣಾಮಗಳನ್ನು ತಡೆಯುವ ನಿಟ್ಟಿನಲ್ಲಿ ಸುರಕ್ಷಿತ ಕೀಟನಾಶಕ ಬಳಕೆ ಮತ್ತು ಸಮಗ್ರ ಪೀಡೆ ನಿರ್ವಹಣೆ ಬಗ್ಗೆ ಹೋಬಳಿ ಮಟ್ಟದಲ್ಲಿ ರೈತರಿಗೆ ಹಾಗೂ ಪರಿಕರ ಮಾರಾಟಗಾರರಿಗೆ ಜನಪ್ರತಿನಿಧಿಗಳು, ಕೃಷಿ ವಿಜ್ಞಾನಿಗಳು, ಕೀಟನಾಶಕ ತಯಾರಕರು ಮತ್ತು ಸರ್ಕಾರೇತರ ಸಂಸ್ಥೆಗಳ ಸಹಯೋಗದೊಂದಿಗೆ ತರಬೇತಿಗಳನ್ನು ಆಯೋಜಿಸಲಾಗುತ್ತಿದೆ.<br>➢ ಸಸ್ಯ ಸಂರಕ್ಷಣೆಯಲ್ಲಿ ಪರಿಸರ ಸ್ನೇಹಿ ಹಾಗೂ ಜೈವಿಕ ಪೀಡೆನಾಶಕಗಳ ಬಳಕೆಯನ್ನು ಉತ್ತೇಜಿಸಲಾಗುತ್ತಿದೆ ಹಾಗೂ ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ರಾಸಾಯನಿಕ ಪೀಡೆನಾಶಕಗಳ ಬಳಕೆ ಮಾಡಲು ಅರಿವು ಮೂಡಿಸಲಾಗುತ್ತಿದೆ.<br>➢ ಕೇಂದ್ರೀಯ ಕೀಟನಾಶಕ ಮಂಡಳಿ ಮತ್ತು ನೋಂದಣಿ ಸಮಿತಿ ಶಿಫಾರಸ್ಸು ಮಾಡಿರುವ ಪೀಡೆನಾಶಕಗಳನ್ನು ಮಾತ್ರ ನಿಗದಿತ ಬೆಳೆಗೆ, ನಿಗದಿತ ಸಮಯದಲ್ಲಿ ಹಾಗೂ ನಿಗದಿತ ಪ್ರಮಾಣದಲ್ಲಿ ಮಾತ್ರ ಬಳಕೆ ಮಾಡಲು ರೈತರಲ್ಲಿ ಅರಿವು ಮೂಡಿಸಲಾಗುತ್ತಿದೆ. |

ಸಂಖ್ಯೆ: AGRI/94/ACT/2023

(ಎನ್. ಚೆಲುವರಾಯಸ್ವಾಮಿ)
ಕೃಷಿ ಸಚಿವರು